## ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 572 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:18-01-2021.

## ಆದೇಶ

1. ವಿಶ್ವಮಟ್ಟದಲ್ಲಿ ಮತ್ತು ರಾಷ್ಟ್ರ ಮಟ್ಟದಲ್ಲಿ ಮಾನವನ ಆರೋಗ್ಯದ ಮೇಲೆ ಅಗಾಧ ದುಷ್ಪರಿಣಾಮಕ್ಕೆ ಕಾರಣವಾದ ನೋವೆಲ್ ಕೊರೋನಾ ವೈರಸ್ (ಕೋವಿಡ್-19) ನಿಯಂತ್ರಣಕ್ಕಾಗಿ ಕೇಂದ್ರ ಸರ್ಕಾರದ ಗೃಹ ಮಂತ್ರಾಲಯವು ಆದೇಶ ಸಂಖ್ಯೆ:40-3/2020-ಡಿಎಂ-ಐ(ಎ), ದಿನಾಂಕ:24.03.2020ರಲ್ಲಿ ರಾಷ್ಟ್ರಾದ್ಯಂತ ಲಾಕ್‌ಡೌನ್ ಘೋಷಿಸಿ ಹಂತ ಹಂತವಾಗಿ ಮರುತೆರವು ಆದೇಶ ಹೊರಡಿಸಿದೆ.

2. ರಾಜ್ಯ ಸರ್ಕಾರದಿಂದಲೂ ಲಾಕ್‌ಡೌನ್ ಅವಧಿಯಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ನೇ ಯಥಾವತ್ತಾಗಿ ಅನುಸರಿಸಲಾಗಿದೆ.

3. ಕೇಂದ್ರ ಸರ್ಕಾರವು ಹಂತ ಹಂತವಾಗಿ ಲಾಕ್‌ಡೌನ್ ಅವಧಿಯನ್ನು ವಿಸ್ತರಿಸಿ ದಿನಾಂಕ:27.10.2020ರ ಆದೇಶದಲ್ಲಿ ಮರುತೆರವಿಗೆ ಕ್ರಮವಹಿಸಿರುತ್ತದೆ. ರಾಜ್ಯ ಸರ್ಕಾರವೂ ಸಹ ಸರ್ಕಾರದ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:29.10.2020ರಲ್ಲಿ ಬಹುತೇಕ ಚಟುವಟಿಕೆಗಳನ್ನು ಪುನರಾರಂಭಿಸಲು "ಮರುತೆರವು" ಮಾರ್ಗಸೂಚಿಯನ್ನು ಹೊರಡಿಸಿದೆ.

4. ರಾಜ್ಯದಲ್ಲಿ ಮರುತೆರವು ಪ್ರಕ್ರಿಯೆ ಆರಂಭವಾಗಿದ್ದಾಗಲೂ ಸಹ ಕೋವಿಡ್-19 ವೈರಾಣು ಸೋಂಕು ಪ್ರಕರಣಗಳು ಕಂಡುಬಂದಿದ್ದು, ಸೋಂಕು ಪ್ರಸರಣವನ್ನು ತಡೆಗಟ್ಟಲು ಕಡ್ಡಾಯವಾಗಿ ರಾಜ್ಯದ ಎಲ್ಲಾ ನಾಗರಿಕರಿಗೆ ಕೋವಿಡ್-19 ಪರೀಕ್ಷೆ ನಡೆಸಿ, ಸೋಂಕು ದೃಢಪಟ್ಟಂತಹವರನ್ನು ಕಡ್ಡಾಯವಾಗಿ 14 ದಿನಗಳ ಕ್ವಾರಂಟೈನ್‌ಗೆ ಒಳಪಡಿಸುವುದು ಅವಶ್ಯಕವಾದ್ದರಿಂದ ಆ ಅವಧಿಯಲ್ಲಿ ಕ್ವಾರಂಟೈನ್‌ಗೆ ಒಳಗಾದ ಸೋಂಕಿತ ವ್ಯಕ್ತಿಗಳ ಜೀವನಾಧಾರಕ್ಕೆ ತೊಡಕಾಗದಂತೆ ಕ್ರಮವಹಿಸುವುದು ಸರ್ಕಾರದ ಆದ್ಯ ಕರ್ತವ್ಯವಾಗಿರುತ್ತದೆ.

5. ಈ ಹಿನ್ನೆಲೆಯಲ್ಲಿ, ರಾಜ್ಯ ಸರ್ಕಾರಕ್ಕೆ ಪ್ರತ್ಯಾಯೋಜನೆಯಾಗಿರುವ ಅಧಿಕಾರದಂತೆ ವಿಪತ್ತು ನಿರ್ವಹಣಾ ಕಾಯ್ದೆ, 2005ರ ಸೆಕ್ಷನ್ 24(ಎಲ್)ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ, ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷನಾಗಿ ಈ ಕೆಳಗೆ ಸಹಿ ಮಾಡಿರುವ ನಾನು ರಾಜ್ಯದ ಅಸಂಘಟಿತ ವಲಯದ ಉದ್ಯೋಗದಾತರು ಅವರ ನೌಕರ/ಕಾರ್ಮಿಕರಿಗೆ ಕೋವಿಡ್-19 ವೈರಾಣು ಸೋಂಕು ದೃಢಪಟ್ಟಿದ್ದಲ್ಲಿ ಮತ್ತು ಆ ಸೋಂಕಿತ ವ್ಯಕ್ತಿಯೊಂದಿಗಿನ ಸಂಪರ್ಕದಲ್ಲಿದ್ದಂತಹ ಪ್ರಾಥಮಿಕ ಸಂಪರ್ಕಿತ ವ್ಯಕ್ತಿ ಎಂದು ದೃಢಪಟ್ಟಿದ್ದಲ್ಲಿ ಅವರ ಹಾಗೂ ರಾಜ್ಯದ ನಾಗರಿಕರ ಆರೋಗ್ಯದ ಹಿತದೃಷ್ಟಿಯಿಂದ ಕ್ವಾರಂಟೈನ್‌ಗೆ ಒಳಪಡಿಸಿ ಚಿಕಿತ್ಸೆ ಪಡೆಯಲು ಈ ಅವಧಿಗೆ ವೇತನ ಸಹಿತ ರಜೆಯನ್ನು ಕಡ್ಡಾಯವಾಗಿ ಮಂಜೂರು ಮಾಡಲು ಆದೇಶಿಸಿರುತ್ತೇನೆ.

6. ಈ ಆದೇಶವು ಲಾಕ್‌ಡೌನ್ ಅವಧಿಯ ಆರಂಭದಿಂದ ಅನ್ವಯಿಸುವಂತೆ ಜಾರಿಗೊಳಿಸಲಾಗಿದೆ.

7. ಈ ಆದೇಶವನ್ನು ಎಲ್ಲಾ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕ ವಲಯದ ಉದ್ಯೋಗದಾತರು ಕಡ್ಡಾಯವಾಗಿ ಪಾಲಿಸತಕ್ಕದ್ದು. ಈ ಆದೇಶದ ಸಮರ್ಪಕ ಜಾರಿ ಮತ್ತು ಪಾಲನೆಯನ್ನು ಹಾಗೂ ಸಮನ್ವಯ ಕಾರ್ಯಗಳನ್ನು ಕಾರ್ಮಿಕ ಇಲಾಖೆಯು ನಿರ್ವಹಿಸತಕ್ಕದ್ದು.

(ಪಿ. ರವಿ ಕುಮಾರ್)
ಮುಖ್ಯ ಕಾರ್ಯದರ್ಶಿ ಹಾಗೂ
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ
ಕಾರ್ಯಕಾರಿ ಸಮಿತಿ ಅಧ್ಯಕ್ಷರು

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.